## ಪ್ರದಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಆಳಂದ.

ಸಿ.ಸಿ.ನಂಃ 243/2014 ಸಿ.ಡಬ್ಲ್ಯೂ –02 ಪಿ.ಡಬ್ಲ್ಯೂ -02

| | | |
|---|---|---|
| ಹೆಸರು | ಃ | ಚಂದ್ರಶಾ |
| ತಂದೆಃ ಗಂಡ | ಃ | ಗ್ಯಾನಬಾ ತಳವಾರ |
| ವಯಸ್ಸು | ಃ | ೭೪ ವರ್ಷ |
| ಉದ್ಯೋಗ | : | ಒಕ್ಕಲುತನ |
| ವಾಸಸ್ಥಳ | ಃ | ಕುಡಕಿ |

ದಿನಾಂಕಃ ೦೫.೦೩.೨೦೨೪

ಸತ್ಯ ಪ್ರತಿಜ್ಞೆಯ ಮೇರೆಗೆ

---

**ಮುಖ್ಯ ವಿಚಾರಣೆ ಮಾನ್ಯ ಸಸಅ ಅವರಿಂದ ಃ**

ಆರೋಪಿತರ ಪರಿಚಯ ಇರುತ್ತದೆ. ಚಾಸಾ-1, 3 ರಿಂದ 10 ರವರ ಪರಿಚಯ ಇರುತ್ತದೆ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿರುವುದಿಲ್ಲ, ಯಾವುದೇ ಮುದ್ದೇ ಮಾಲುಗಳನ್ನು ಜಪ್ತಿಪಡಿಸಿಕೊಂಡಿರುವುದಿಲ್ಲ. ಒಂದು ದಾಖಲೆಗೆ ಪೋಲಿಸರು ಸಹಿ ಮಾಡು ಎಂದು ಹೇಳಿದಕ್ಕೆ ಸಹಿ ಮಾಡಿರುತ್ತೇನೆ. ಸಾಕ್ಷಿಯು ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಪಂಚನಾಮೆಯನ್ನು ನಿಪಿ-೨ ಎಂದು, ಸಹಿಯನ್ನು ನಿಪಿ-೨(ಎ) ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು)

**ಪಾಟೀ ಸವಾಲು ಃ ಸ.ಸ.ಅ. ವಕೀಲರಿಂದ.**

ಈಗ ಓದಿ ಹೇಳಿದ ಹಾಗೆ ನನ್ನ ಮತ್ತು ಚಾಸಾ-೩ ರವರ ಸಮಕ್ಷಮ ಪೋಲಿಸರು ಪಂಚನಾಮೆ ಜರುಗಿಸಿ ಮುದ್ದೇ ಮಾಲುಗಳನ್ನು ಜಪ್ತಿಪಡಿಸಿಕೊಂಡಿರುತ್ತಾರೆ ಎಂದರೆ ಸರಿ ಅಲ್ಲ. ಪಂಚನಾಮೆ ಜರುಗಿಸಿದ್ದರೂ ಜರುಗಿಸಿಲ್ಲ ಎಂದು ಆರೊಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂಧರೆ ಸರಿ ಅಲ್ಲ.

**ಪಾಟೀ ಸವಾಲು ಆರೋಪಿತರ ಪರ ಶ್ರೀ ಎಂ.ವಿ.ಇ. ವಕೀಲರಿಂದ**

ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುವುದರಿಂದ ಪಾಟೀ ಸವಾಲನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆಃ-** ಇರುವುದಿಲ್ಲ.

ಓ.ಹೇ.ಕೇ.ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಆಳಂದ